ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**50(83)**
ಸದಸ್ಯರ ಹೆಸರು	:	ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	21.09.2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ದಿನಾಂಕ:01/08/2008 ನಂತರ ಸರ್ಕಾರಿ ಪ್ರೌಢಶಾಲೆಗಳಲ್ಲಿ ನೇಮಕಾತಿ/ಬಡ್ತಿ ಹೊಂದಿದ ಶಿಕ್ಷಕರಿಗೆ ವಿಶೇಷ ಭತ್ಯೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	'ಬಂದಿದೆ' ಸರ್ಕಾರದ ಆದೇಶ ಸಂಖ್ಯೆ: ಇಡಿ 255 ಎಸ್‌ಎಲ್‌ಬಿ 2016, ದಿನಾಂಕ:23/07/2018ರಂತೆ ದಿನಾಂಕ:01/08/2008ರ ನಂತರ ನೇಮಕಗೊಂಡ ಸರ್ಕಾರಿ/ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ. ಆದರೂ ಕೆಲವು ಬಟವಾಡೆ ಅಧಿಕಾರಿಗಳು ನಿಯಮಬಾಹಿರವಾಗಿ ದಿನಾಂಕ:01/08/2008ರ ನಂತರ ನೇಮಕಗೊಂಡ ಸರ್ಕಾರಿ / ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ನೇಮಕಾತಿ / ಬಡ್ತಿ ಹೊಂದಿದ ಈ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಿರುತ್ತಾರೆ.
ಆ.	ಸದರಿ ಭತ್ಯೆಯನ್ನು ಹಿಂಪಡೆಯಲು ಆದೇಶಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	'ಬಂದಿದೆ'
ಇ.	ಈ ರೀತಿ ಹಿಂಪಡೆಯಲು ಕಾರಣಗಳೇನು: (ವಿವರ ನೀಡುವುದು)	ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ ಸ್ಥಳೀಯ ಸಂಸ್ಥೆಗಳು, ಇವರ ಮಾರ್ಚ್ 2017ಕ್ಕೆ ಕೊನೆಗೊಂಡ ವರದಿಯ ಕಂಡಿಕೆ 2.1ರಲ್ಲಿ ಸರ್ಕಾರದ ಆದೇಶಗಳಿಗೆ ವಿರುದ್ಧವಾಗಿ ಬಟವಾಡೆ ಅಧಿಕಾರಿಗಳು ದಿನಾಂಕ:01/08/2008ರ ನಂತರ ನೇಮಕಗೊಂಡ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ಪಾವತಿಸಿದ್ದು, ಸದರಿ ಮೊತ್ತವನ್ನು (ಪ್ರಾಥಮಿಕ ರೂ.1.27 ಮತ್ತು ರೂ.ಪ್ರೌಢ–5.13 ಕೋಟಿ) ಪಾವತಿಸಿರುವ ಬಗ್ಗೆ ಆಕ್ಷೇಪಣೆ ವ್ಯಕ್ತಪಡಿಸಿ ಈಮೊತ್ತವನ್ನು ಸಂಬಂಧಿಸಿದ ಶಿಕ್ಷಕರಿಂದ ವಸೂಲು ಮಾಡಲು ತಿಳಿಸಿ ಆಕ್ಷೇಪಣೆಯನ್ನು ಮುಂದುವರೆಸಿರುತ್ತಾರೆ. ಕೆಲವು ಬಟವಾಡೆ ಅಧಿಕಾರಿಗಳು ದಿನಾಂಕ:01/08/2008ರ ನಂತರ ನೇಮಕಗೊಂಡ ಶಿಕ್ಷಕರಿಗೆ ಸರ್ಕಾರದ ಆದೇಶಗಳಿಗೆ ವಿರುದ್ಧವಾಗಿ ವಿಶೇಷ ಭತ್ಯೆಯನ್ನು ಮಂಜೂರು ಮಾಡಿರುವುದು ನಿಯಮಬಾಹಿರವಾಗಿರುವುದರಿಂದ ಈ ರೀತಿ ಹೆಚ್ಚುವರಿಯಾಗಿ ನೀಡಿರುವ ಮೊತ್ತವನ್ನು ವಸೂಲಿ ಮಾಡಲು ಆದೇಶಿಸಿದೆ.
ಈ.	ಹಿಂಪಡೆದಿರುವ ಆದೇಶವನ್ನು ರದ್ದುಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ: ಹಾಗಿದ್ದಲ್ಲಿ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು?	ಮಹಾಲೇಖಪಾಲರ ಆಕ್ಷೇಪಣೆಯ ಬಗ್ಗೆ ಹಾಗೂ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಆದೇಶದ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: ಇಪಿ 152 ಎಸ್‌ಎಲ್‌ಬಿ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ
ಸಕಾಲ ಸಚಿವರು